# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 560

ಸದಸ್ಯರ ಹೆಸರು : ಶ್ರೀ. ಪ್ರತಾಪ್ ಸಿಂಹ ನಾಯಕ್.ಕೆ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು.

ಉತ್ತರಿಸುವ ದಿನಾಂಕ : 20.02.2024

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಡಿಕೆ ತೋಟಗಳಿಗೆ ಹಬ್ಬಿರುವ ಎಲೆ ಚುಕ್ಕಿ ಮತ್ತು ಹಳದಿ ರೋಗ ಬಾಧೆಯಿಂದಾಗಿ ಆರ್ಥಿಕ ಸಂಕಷ್ಟಕ್ಕೀಡಾಗಿರುವ ಅಡಿಕೆ ಬೆಳೆಗಾರರಿಗೆ ನೆರವಾಗಲು ಅಡಿಕೆ ಉತ್ಪನ್ನಗಳ ವ್ಯಾಪಕ ಸಂಶೋಧನೆ ಹಾಗೂ ಮೌಲ್ಯವರ್ಧನೆಗೆ ಸಂಬಂಧಿಸಿದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು(ವಿವರ ನೀಡುವುದು) | ಅಡಿಕೆ ಬೆಳೆಗಾರರಿಗೆ ನೆರವಾಗಲು ಅಡಿಕೆ ಉತ್ಪನ್ನಗಳ ವ್ಯಾಪಕ ಸಂಶೋಧನೆ ಹಾಗೂ ಮೌಲ್ಯವರ್ಧನೆಗೆ ಸಂಬಂಧಿಸಿದಂತೆ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ರವರಿಂದ ಪ್ರತಿ ವರ್ಷ ಕೃಷಿ ಮೇಳದಲ್ಲಿ ರೈತರಿಗೆ ಅಡಿಕೆ ಮೌಲ್ಯವರ್ಧನೆಯಲ್ಲಿರುವ ಅವಕಾಶಗಳ ಕುರಿತು ತಾಂತ್ರಿಕ ಸಮಾವೇಶವನ್ನು ಏರ್ಪಡಿಸಲಾಗುತ್ತಿದೆ. ಅಡಿಕೆ ಮೌಲ್ಯವರ್ಧನೆಯಲ್ಲಿ ಕೃಷಿ ನವೋದ್ಯಮಿಗಳಿಂದ ತಾಂತ್ರಿಕ ಉಪನ್ಯಾಸ ಮತ್ತು ಅಡಿಕೆ ಉತ್ಪನ್ನಗಳ ಪ್ರದರ್ಶನ ಏರ್ಪಡಿಸಿ ಅಡಿಕೆ ಬೆಳೆಗಾರರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಸದರಿಯವರು ವಿಶ್ವವಿದ್ಯಾಲಯದ ಕೃಷಿ ನವೋದ್ಯಮ ಒಡಂಬಡಿಕೆಯಲ್ಲಿ ಇದ್ದು ರೈತರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. |
| ಆ) | ವಿವಿಧ ಬಗೆಯ ಹಲವಾರು ಉತ್ಪನ್ನಗಳ ತಯಾರಿಕೆಯಲ್ಲಿ ಅಡಿಕೆ ಉತ್ಪನ್ನಗಳನ್ನು ವ್ಯಾಪಕವಾಗಿ ಬಳಸಿಕೊಳ್ಳುವ ಸಾಧ್ಯತೆಗಳ ಕುರಿತು ವ್ಯಾಪಕ ಸಂಶೋಧನೆ ಹಾಗೂ ಮೌಲ್ಯವರ್ಧನೆಗೆ ಉತ್ತೇಜನ ನೀಡುವ ಕುರಿತು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ; | ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದಲ್ಲಿ ಅಡಿಕೆ ಸಿಪ್ಪೆಯಿಂದ ಕಾಂಪೋಸ್ಟ್ ಗೊಬ್ಬರ ತಯಾರಿಕೆಗೆ ಬೇಕಾಗುವ ಸೂಕ್ಷ್ಮ ಜೀವಿಗಳ ಮಿಶ್ರಣವನ್ನು ಅಭಿವೃದ್ಧಿಪಡಿಸಿದ್ದು, ಅಡಿಕೆ ಬೆಳೆಗಾರರು ಈ ತಂತ್ರಜ್ಞಾನವನ್ನು ಅಳವಡಿಸಿಕೊಂಡಿದ್ದಾರೆ. ಅಡಿಕೆ ಹಾಳೆಗಳಿಂದ ಪರಿಸರಸ್ನೇಹಿ ತಟ್ಟೆಗಳನ್ನು ಮಾಡುವ ತಂತ್ರಜ್ಞಾನವನ್ನು ಚಿಕ್ಕ ಮತ್ತು ಮದ್ಯಮ ಗಾತ್ರದ ಉದ್ದಿಮೆದಾರರಿಗೆ ಹಾಗೂ ಅಡಿಕೆ ಬೆಳೆಗಾರರಿಗೆ ತರಬೇತಿ ಮೂಲಕ ಮೌಲ್ಯವರ್ಧನೆಗೆ ಉತ್ತೇಜನ ನೀಡಲಾಗುತ್ತಿದೆ. |
| ಇ) | ಆ ಮೂಲಕ ಎಲೆ ಚುಕ್ಕಿ ಮತ್ತು ಹಳದಿ ರೋಗ ಬಾಧೆಯಿಂದಾಗಿ ಆರ್ಥಿಕವಾಗಿ ಸಂಕಷ್ಟಕ್ಕೀಡಾಗಿರುವ ಅಡಿಕೆ ಬೆಳೆಗಾರರ ನೆರವಿಗೆ ಸರ್ಕಾರ ಕೂಡಲೇ ಮುಂದಾಗುವುದೇ? | |

HORTI 75 HGM 2024

(ಎಸ್.ಎಸ್.ಮಲ್ಲಿಕಾರ್ಜುನ್)

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು